ಅಧ್ಯಕ್ಷರು: ನಮ್ಮ ಊರಿನಲ್ಲೇನೂ ದೇವಸ್ಥಾನ ಇಲ್ಲವೇ?

(ಗೊಂದಲ)

ಶ್ರೀ ಸಿ.ಎನ್. ಬಾಲಕೃಷ್ಣ: ಎಲ್ಲಾ ಕಡೆ ಗಲಾಟೆ ಮಾಡುತ್ತಾರೆ.

ಶ್ರೀ ಟಿ.ಬಿ. ಜಯಚಂದ್ರ: ಹಣ ಬಿಡುಗಡೆ ಮಾಡುವುದರಲ್ಲಿ ಮುಜರಾಯಿ ಮತ್ತು ಮುಜರಾಯೇತರ ದೇವಸ್ಥಾನಗಳಿಗೆ ಎಲ್ಲಾ ಕ್ಷೇತ್ರಗಳಲ್ಲಿಯೂ ಬಿಡುಗಡೆ ಮಾಡಬೇಕಾಗುತ್ತದೆ. ಆದಷ್ಟು ಅನುದಾನವನ್ನು ಹೆಚ್ಚು ಮಾಡುವಂತಹ ಪ್ರಯತ್ನವನ್ನು ನಾವು ಮಾಡುತ್ತೇವೆ.

ಶ್ರೀ ಸಿ.ಟಿ. ರವಿ: ನಮ್ಮ ಊರಿನ ದೇವರಿಗೆ ಹಣ ಕೊಡಲಿಲ್ಲವೆಂದರೆ ದೇವರಿಗೆ ಉಡಿಗೆ ಹಾಕುತ್ತೇವೆ.

ಶ್ರೀ ಹೆಚ್.ಸಿ. ಬಾಲಕೃಷ್ಣ: ಮಾನ್ಯ ಅಧ್ಯಕ್ಷರೆ, ಆಯವ್ಯಯದಲ್ಲಿ ಹಣವನ್ನು ಕೊಟ್ಟಿದ್ದಾರೆ. ಕ್ಷೇತ್ರಕ್ಕೆ ಎಷ್ಟು ಹಣ ಕೊಡುತ್ತೀರಿ ಎನ್ನುವುದನ್ನು ಹೇಳಿದರೆ ನಾವು ಸುಮ್ಮನೆ ಆಗುತ್ತೇವೆ.

ಅಧ್ಯಕ್ಷರು: ಮಾನ್ಯ ಕೆ.ಎಂ.ಶಿವಲಿಂಗೇಗೌಡರು ಮಾತನಾಡುವುದು.

7. **ವಿಷಯ:** ಹಾಸನ ಜಿಲ್ಲೆಯ ಅರಸೀಕೆರೆ ತಾಲ್ಲೂಕಿಗೆ 2014–15ನೇ ಸಾಲಿನಲ್ಲಿ ಕುಡಿಯುವ ನೀರನ್ನು ಟ್ಯಾಂಕರ್ ಮೂಲಕ ಬರಗಾಲ ನಿರ್ಮಾಣ ಸಮಿತಿಯ ಅದೇಶದ ಮೇರೆಗೆ ಸರಬರಾಜು ಮಾಡಿದ ಗುತ್ತಿಗೆದಾರರಿಗೆ ಬಾಕಿ ಮೊತ್ತವನ್ನು ತುರ್ತಾಗಿ ಬಿಡುಗಡೆ ಮಾಡುವ ಬಗ್ಗೆ.

****

ಶ್ರೀ ಕೆ.ಎಂ. ಶಿವಲಿಂಗೇಗೌಡ (ಅರಸೀಕೆರೆ): ಮಾನ್ಯ ಅಧ್ಯಕ್ಷರೆ, 2014–15ನೇ ಸಾಲಿನಲ್ಲಿ ಅರಸೀಕೆರೆ ತಾಲ್ಲೂಕನ್ನು ಬರಗಾಲಪೀಡಿತ ಪ್ರದೇಶ ಎಂದು ಘೋಷಣೆ ಮಾಡಿ ಟ್ಯಾಂಕರ್ ಮೂಲಕ ನೀರನ್ನು ಸರಬರಾಜು ಮಾಡುವುದಕ್ಕೆ ಜಿಲ್ಲಾಧಿಕಾರಿಗಳು ಅನುಮೋದನೆಯನ್ನು ಕೊಟ್ಟಿದ್ದರು. ಆದರೆ ಅವರೇ

ಹೇಳಿರುವ ಹಾಗೆ, ಸುಮಾರು 6–7 ತಿಂಗಳಿನಿಂದ ಇನ್ನೂ 52 ಲಕ್ಷ ರೂ.ಗಳು ಬಾಕಿ ಇದೆ.

ಅಧ್ಯಕ್ಷರು: ಯಾವಾಗ ಹಣವನ್ನು ಬಿಡುಗಡೆ ಮಾಡುತ್ತೀರಿ ಎಂದು ಕೇಳಿ.

ಶ್ರೀ ಕೆ.ಎಂ. ಶಿವಲಿಂಗೇಗೌಡ: ನಾವೂ ಎಲ್ಲರನ್ನೂ ಬಹಳ request ಮಾಡಿದ್ದೇವೆ. ಆ contractors ಬಹಳ ನಮ್ಮ ಮರ್ಯಾದೆ ಕಳೆಯುತ್ತಿದ್ದಾರೆ. ಹೇಳಬೇಕೆಂದರೆ ಊರಿಗೆ ಹೋದರೆ ನಮ್ಮ ಮನೆಯ ಹತ್ತಿರ ಬಂದು ಟ್ಯಾಂಕರ್‌ಅನ್ನೂ ನಿಲ್ಲಿಸಿಕೊಂಡಿರುತ್ತಾರೆ.

ಅಧ್ಯಕ್ಷರು: ಮಾನ್ಯ ಶಿವಲಿಂಗೇಗೌಡರೆ, ಇದು ಚರ್ಚೆ ಕಾಲ ಅಲ್ಲ, ಬಾಕಿ ಹಣವನ್ನು ಯಾವಾಗ ಬಿಡುಗಡೆ ಮಾಡುತ್ತೀರಿ ಎನ್ನುವುದನ್ನು ಕೇಳಿ.

ಶ್ರೀ ಕೆ.ಎಂ. ಶಿವಲಿಂಗೇಗೌಡ: ಯಾವಾಗ ಹಣ ಬಿಡುಗಡೆ ಮಾಡುತ್ತೀರಿ ಎಂದು ನಿಖರವಾಗಿ ಹೇಳಿ.

ಶ್ರೀ ಟಿ.ಬಿ. ಜಯಚಂದ್ರ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರು) (ಮಾನ್ಯ ಕಂದಾಯ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, ಇವತ್ತೇ ಹಣವನ್ನು ಬಿಡುಗಡೆ ಮಾಡುತ್ತೇವೆ. ಏಕೆಂದರೆ ನಾನೂ ಕೂಡ ಸಚಿವ ಸಂಪುಟದ ಉಪ ಸಮಿತಿಯಲ್ಲಿದ್ದೇನೆ. ತೊಂದರೆ ಗೊತ್ತಿದೆ.

ಅಧ್ಯಕ್ಷರು: ಮಾನ್ಯ ಹೆಚ್.ಕೆ.ಕುಮಾರಸ್ವಾಮಿಯವರು ಮಾತನಾಡುವುದು.

8. ವಿಷಯ: ಹಾಸನ ಜಿಲ್ಲೆಯ ತಾಲ್ಲೂಕು ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರ ಹುದ್ದೆ ಖಾಲಿ ಇದ್ದು ರೋಗಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ.

*****

ಶ್ರೀ ಹೆಚ್.ಕೆ ಕುಮಾರಸ್ವಾಮಿ (ಸಕಲೇಶಪುರ): ಮಾನ್ಯ ಆರೋಗ್ಯ ಸಚಿವರೆ, ನಮ್ಮ ತಾಲ್ಲೂಕು ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರನ್ನು ನೇಮಕ ಮಾಡುವಾಗ ಸುಮಾರು ಹುದ್ದೆಗಳು ಖಾಲಿ ಇವೆ. Doctors ಗಳ counseling